(ದಿಃ 07.07.2025 ರಂದು ಸಸಅ ರವರು ಮುಂದುವರೆದ ಮುಖ್ಯ ವಿಚಾರಣೆ ಇಲ್ಲ ಎಂದು ತಿಳಿಸಿರುತ್ತಾರೆ. )

**ದಿನಾಂಕಃ 07/03/2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲು: ಆರೋಪಿತರ ಪರ ಶ್ರೀ ಡಿ ಪಿ ಎಲ್ ವಕೀಲರಿಂದಃ**

1. ನನ್ನ ದೂರಿನಲ್ಲಿ ಏನು ಬರೆಸಿದ್ದೇನೆ ಎಂದು ಗೊತ್ತಿಲ್ಲ. ನಾನು ಯಾವುದೇ ದಾಖಲೆಗೆ ಸಹಿ ಮಾಡಿಲ್ಲ. ಆದರೆ ಪೋಲೀಸರು ಜಮೀನಿನ ಬಳಿ ಬಂದಾಗ ಸಹಿ ಮಾಡಿದ್ದೇನೆ. ಜಮೀನಿನ ವಿಚಾರಕ್ಕೆ ಪೋಲೀಸರು ಬಂದಿದ್ದರು. ಜಮೀನಿನ ಬಳಿ ಒಂದು ಸಹಿ ಮಾಡಿದ್ದೆ. ಅದರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ಪೋಲೀಸರು ಸ್ಥಳನಿಂದ ಏನು ತೆಗೆದುಕೊಂಡು ಹೋಗಿಲ್ಲ. ಪೋಲೀಸರು ನನ್ನನ್ನು ಯಾವುದೇ ವಸ್ತುಗಳನ್ನು ಕೊಡಿ ಎಂದು ಕೇಳಿಲ್ಲ. ಜಮೀನಿನ ವಿಚಾರ ಹೊರತುಪಡಿಸಿ ಬೇರೆ ಯಾವ ವಿಚಾರಕ್ಕೆ ಬಂದಿದ್ದರು ಎಂದು ಗೊತ್ತಿಲ್ಲ, ಆದರೆ ಜಮೀನನ್ನು ಪರಿಶೀಲಿಸಿ ಹೋಗಿದ್ದರು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಬೇರೆ ವಿಚಾರ ಗೊತ್ತಿಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿರುವ ಎಲ್ಲಾ ಅಂಶಗಳು ಸುಳ್ಳು ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

**ತೆರದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು**

**ಓದಿ ಹೇಳಿ ಕೇಳಿ ಸರಿ ಇದೆ ಎಂದು ಸಾಕ್ಷಿ ಒಪ್ಪಿಕೊಂಡಿರುತ್ತಾರೆ.**

**1 ನೇ ಹೆಃಸಿ.ನ್ಯಾ ಹಾಗೂ ಪ್ರ.ದ.ನ್ಯಾದಂ.**
**ಪಿರಿಯಾಪಟ್ಟಣ.**